# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 1) ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಟೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ, 2) ಶ್ರೀ ಬಸವಣ್ಣ, ಕಿರಿಯ ಅಭಿಯಂತರರು, ಪಂ.ರಾ.ಇಂ.ಉಪವಿಭಾಗ, ಹಿರೇಕೆರೂರು ಮತ್ತು 3) ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-4316/2014/ARLO1, ದಿನಾಂಕ: 12.07.2017
2) ಸಮಸಂಖ್ಯೆಯ ಸರ್ಕಾರದ ಪತ್ರ, ದಿನಾಂಕ. 09.08.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 04.07.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಚಂದ್ರಪ್ಪ ಬಿನ್ ತಿರುಕಪ್ಪ ಬಳ್ಳಿಗಾವಿ, ಸುತ್ತಕೋಟೆ ಗ್ರಾಮ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 1) ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಡೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ, 2) ಅಧ್ಯಕ್ಷರು ಮತ್ತು 3) ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ಇವರುಗಳ ವಿರುದ್ಧ ಸುತ್ತಕೋಟಿ ಗ್ರಾಮ 2011-12 ನೇ ಸಾಲಿನಲ್ಲಿ ಮ.ಗಾಂ.ರಾ.ಗ್ರಾ.ಉ.ಖಾತರಿ ಯೋಜನೆಯಡಿಯಲ್ಲಿ ತಮ್ಮ ಗ್ರಾಮದ ಸ್ಮಶಾನದಲ್ಲಿ ನೆಡುವ ಮತ್ತು ತಂತಿ ಬೇಲಿ ನೆಡುವ ಕಾಮಗಾರಿಯನ್ನು ರೂ.10,125 ಮೊತ್ತದಲ್ಲಿ ಎದುರುದಾರರು ಮಾಡಿದ್ದು, ಸದರಿ ಕಾಮಗಾರಿ ಕಳಪೆಯಾಗಿರುತ್ತದೆಂದು ದೂರು ಸಲ್ಲಿಸಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

ಕಡತದ ಸಂಗತಿಗಳು, ತನಿಖಾಧಿಕಾರಿಗಳ ವರದಿ, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳು ಹಾಗೂ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಎದುರುದಾರರ ವಿರುದ್ಧದ ನಡವಳಿಗಳನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿ, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಎದುರುದಾರರಾದ 1) ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಡೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ, 2) ಶ್ರೀ ಬಸವಣ್ಣ, ಕಿರಿಯ ಅಭಿಯಂತರರು, ಪಂ.ರಾ.ಇಂ.ಉಪವಿಭಾಗ, ಹಿರೇಕೆರೂರು ಮತ್ತು 3) ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ಇವರುಗಳ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14ಎ ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಹಾಗೂ ಅಧ್ಯಕ್ಷರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರನ್ವಯ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ. ಈ ಬಗ್ಗೆ ಕ್ರಮವಹಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾವೇರಿ ಜಿಲ್ಲಾ ಪಂಚಾಯತಿ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, 1) ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಡೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ, 2) ಶ್ರೀ ಬಸವಣ್ಣ, ಕಿರಿಯ ಅಭಿಯಂತರರು, ಪಂ.ರಾ.ಇಂ.ಉಪವಿಭಾಗ, ಹಿರೇಕೆರೂರು ಮತ್ತು 3) ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 609 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 09.08.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, 1) ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಡೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ, 2) ಶ್ರೀ ಬಸವಣ್ಣ, ಕಿರಿಯ ಅಭಿಯಂತರರು, ಪಂ.ರಾ.ಇಂ.ಉಪವಿಭಾಗ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಮತ್ತು 3) ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 34 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5. ಕಾರ್ಯನಿರ್ವಾಹಕ ಅಧಿಕಾರಿ, ಹಿರೇಕೆರೂರು ತಾಲ್ಲೂಕು ಪಂಚಾಯತಿ, ಹಿರೇಕೆರೂರು, ಹಾವೇರಿ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಕೆ.ಪಿ.ಮಾನೆ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಸುತ್ತಗೋಡೆ ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
7. ಶ್ರೀ ಬಸವಣ್ಣ, ಕಿರಿಯ ಅಭಿಯಂತರರು, ಪಂ.ರಾ.ಇಂ.ಉಪವಿಭಾಗ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
8. ಶ್ರೀ ನಾಗರಾಜ, ಕಿರಿಯ ಅಭಿಯಂತರರು, ಗ್ರಾ.ಕು.ನೀ. ಮತ್ತು ನೈರ್ಮಲ್ಯ ಉಪವಿಭಾಗ, ಹಿರೇಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ.
9. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.